# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಷ್ಟ್ರ ಪ್ರಶಸ್ತಿ ಪುರಸ್ಕೃತರಿಗೆ ಕರ್ನಾಟಕ ಸಾರಿಗೆ ನಿಗಮದ ವತಿಯಿಂದ ವಿತರಿಸಲಾಗುತ್ತಿರುವ ಉಚಿತ ಬಸ್ ಪಾಸ್‌ಗಳ ಮರು ಪಾವತಿಸುವ ಕುರಿತು.

ಓದಲಾಗಿದೆ: ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ:ಡಿಕೆಸಿ:13015/01/2016-17, ದಿನಾಂಕ:19-12-2019.

.......

**ಪ್ರಸ್ತಾವನೆ:**

ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಸಾಹಿತಿ / ಕಲಾವಿದರು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವತಿಯಿಂದ ರಾಜ್ಯ ಮತ್ತು ಹೊರ ರಾಜ್ಯಗಳಲ್ಲಿ ಸಂಚರಿಸಲು ಅನುಕೂಲವಾಗುವಂತೆ, ಉಚಿತ ಬಸ್‌ಪಾಸ್‌ಗಳನ್ನು ವಿತರಿಸಲಾಗಿದ್ದು, ಇದರ ವೆಚ್ಚವನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಇವರಿಗೆ ಪಾವತಿಸಲಾಗುತ್ತಿದೆ. 2016-17 ರಿಂದ 2019-20ನೇ ಸಾಲಿನವರೆಗೆ 4 ವರ್ಷಗಳ ಪ್ರಯಾಣ ವೆಚ್ಚದ ಬಾಬ್ತು ರೂ.20.03.040.00ಗಳನ್ನು ಪಾವತಿಸುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಇವರು ಕೋರಿರುತ್ತಾರೆಂದು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಮೇಲೆ ಓದಲಾದ ಪತ್ರದಲ್ಲಿ ತಿಳಿಸಿರುತ್ತಾರೆ.

ದಿನಾಂಕ: 07-09-2019 ರಂದು ಸನ್ಮಾನ್ಯ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ಕನ್ನಡ ಭವನದಲ್ಲಿ ನಡೆದ ಸಭೆಯಲ್ಲಿ ರಾಜ್ಯ ಪ್ರಶಸ್ತಿ ಪುರಸ್ಕೃತರಿಗೆ ನೀಡಲಾಗುವ ಬಸ್ ಪ್ರಯಾಣ ಭತ್ಯೆಯನ್ನು ಕೆಎಸ್‌ಆರ್‌ಟಿಸಿಗೆ ಪಾವತಿಸುವುದನ್ನು ತಡೆಹಿಡಿದು, ನೇರವಾಗಿ ಸಂಬಂಧಿತ ~~ಕಲಾವಿದರಿಗೆ~~ ಪಾವತಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಮಾನ್ಯ ಇಲಾಖಾ ಸಚಿವರು ಸೂಚಿಸಿರುತ್ತಾರೆ.

ಅದರಂತೆ, 2016-17 ರಿಂದ 2019-20ನೇ ಸಾಲಿನವರೆಗೆ 4 ವರ್ಷಗಳ ಪ್ರಯಾಣ ವೆಚ್ಚದ ಬಾಬ್ತು ರೂ.20,03,040.00ಗಳನ್ನು ಪಾವತಿಸಿ ಮುಂದಿನ ಆರ್ಥಿಕ ವರ್ಷದಿಂದ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಸಾಹಿತಿ / ಕಲಾವಿದರು ಪ್ರಯಾಣಿಸಿದ ವಾಸ್ತವ ವೆಚ್ಚದ ವಿವರಗಳನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯವರಿಂದ ದೃಢೀಕರಣ ಪಡೆದು, ನೇರವಾಗಿ ಸಾಹಿತಿ / ಕಲಾವಿದರಿಗೆ ಪಾವತಿಸಲು ಕ್ರಮ ವಹಿಸುವ ಬಗ್ಗೆ ಸೂಕ್ತ ಸರ್ಕಾರಿ ಆದೇಶ ಹೊರಡಿಸುವಂತೆ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶಕರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಕಸಂವಾ 14 ಕಸಧ 2020, ಬೆಂಗಳೂರು, ದಿನಾಂಕ:25-02-2020

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಸಾಹಿತಿ / ಕಲಾವಿದರಿಗೆ 2016-17 ರಿಂದ 2019-20ನೇ ಸಾಲಿನವರೆಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಿಂದ ವಿತರಿಸಲಾಗುತ್ತಿರುವ ಉಚಿತ ಬಸ್ ಪಾಸ್ ವೆಚ್ಚ, 4 ವರ್ಷಗಳ ಪ್ರಯಾಣ ವೆಚ್ಚದ ಬಾಬ್ತು ರೂ.20,03,040.00ಗಳನ್ನು (ರೂಪಾಯಿ ಇಪ್ಪತ್ತು ಲಕ್ಷದ ಮೂರು ಸಾವಿರದ ನಲವತ್ತು ರೂ.ಗಳು ಮಾತ್ರ) ಸಂಬಂಧಪಟ್ಟವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ.

ಮುಂದಿನ ಆರ್ಥಿಕ ವರ್ಷದಿಂದ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಸಾಹಿತಿ / ಕಲಾವಿದರು ಪ್ರಯಾಣಿಸಿದ ವಾಸ್ತವ ವೆಚ್ಚದ ವಿವರಗಳನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯವರಿಂದ ದೃಢೀಕರಣ ಪಡೆದು, ನೇರವಾಗಿ ಸಾಹಿತಿ / ಕಲಾವಿದರಿಗೆ ಪಾವತಿಸಲು ಕ್ರಮ ವಹಿಸುವುದು.

2...

24/2/20

2) ಈ ವೆಚ್ಚವನ್ನು 2019-20ನೇ ಸಾಲಿನ ಲೆಕ್ಕಶೀರ್ಷಿಕೆ 2205-00-102-4-31-059 ರಡಿಯಲ್ಲಿ ಭರಿಸತಕ್ಕದ್ದು.

3) ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2020, ದಿನಾಂಕ: 13-01-2020ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Malati PS 25/2/20
(ಪಿ.ಎಸ್. ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
(ಸಂಸ್ಕೃತಿ ಶಾಖೆ)

ಗೆ:

1. ಮಹಾಲೇಖಪಾಲರು (ಎ&ಇ), (ಜಿ&ಎಸ್ ಎಸ್ ಎ), (ಇ & ಆರ್ ಎಸ್ ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
3. ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಖಜಾನೆ ಅಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಸಂಬಂಧಪಟ್ಟವರಿಗೆ (ನಿರ್ದೇಶಕರ ಮುಖಾಂತರ)
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.